E-Office No:67799

# ಬೆಂಗಳೂರು ಉತ್ತರ ವಿಶ್ವವಿದ್ಯಾಲಯ

ಶ್ರೀ ದೇವರಾಜ ಅರಸು ಬಡಾವಣೆ ಟಮಕ, ಕೋಲಾರ-563 103

ಸಂಖ್ಯೆ: ಬೆಂ.ಉ.ವಿವಿ/ಕು.ಸ.ಕಾ/ಸಂ.ನವೀ/ 1213 /2024-25 ದಿನಾಂಕ: 24.09.2024

## ಅಧಿಸೂಚನೆ

**ವಿಷಯ**: 2024-25 ನೇ ಶೈಕ್ಷಣಿಕ ಸಾಲಿಗೆ ಸಂಯೋಜನೆ ನವೀಕರಿಸುವ ಬಗ್ಗೆ.

**ಉಲ್ಲೇಖ**: 1.ಸಾಮಾನ್ಯ ವಿದ್ಯಾವಿಷಯಕ ಪರಿಷತ್ತು ಸಭೆಯ ನಡಾವಳಿ.ದಿನಾಂಕ:19.06.2024
2.ಸಾಮಾನ್ಯ ಸಿಂಡಿಕೇಟ್ ಸಭೆಯ ನಡಾವಳಿ ದಿನಾಂಕ:19.06.2024
3.ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:22.09.2024:

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ 17ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಸಕ್ಷಮ ಪ್ರಾಧಿಕಾರಗಳ ಅನುಮೋದನೆಯೊಂದಿಗೆ ಬೆಂಗಳೂರು ಉತ್ತರ ವಿಶ್ವವಿದ್ಯಾಲಯವು 2024-25ನೇ ಶೈಕ್ಷಣಿಕ ಸಾಲಿಗೆ **ಕ್ಯಾವೀಲಿಯರ್ ಆನಿಮೇಷನ್ ಅಂಡ್ ಮೀಡಿಯಾ ಕಾಲೇಜು,# 56-04, ಕ್ಯಾವೀಲಿಯರ್ ಟವರ್, ಡಾ.ಬೇಂದ್ರೆ ಬಡಾವಣೆ, ಗುಬ್ಬಿ ಕ್ರಾಸ್, ಕೊತ್ತನೂರು, ಬೆಂಗಳೂರು-560077.** ಇವರು ನಡೆಸುತ್ತಿರುವ ಕೆಳಕಂಡ ಕೋರ್ಸುಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟುಸಂಯೋಜನೆಯನ್ನು ನವೀಕರಿಸಿ ಮುಂದುವರಿಸಿದೆ.

| ಕೋರ್ಸ್ | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|
| ಬಿ.ವಿ.ಎ | ಆನಿಮೇಷನ್ ಅಂಡ್ ಮಲ್ಟಿಮೀಡಿಯಾ | 40 (ನಲವತ್ತು) |
| ಬಿ.ಕಾಂ | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 40 (ನಲವತ್ತು) |
| ಬಿ.ಬಿ.ಎ | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 60 (ಅರವತ್ತು) |
| ಬಿ.ಬಿ.ಎ | ಏವಿಯೇಷನ್ ಮ್ಯಾನೇಜ್ಮೆಂಟ್ | 60 (ಅರವತ್ತು) |
| ಬಿ.ಸಿ.ಎ | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 60 (ಅರವತ್ತು) |

**ವಿ.ಸೂ:**

1. ವಿಶ್ವವಿದ್ಯಾಲಯವು ಅನುಮೋದಿಸಿರುವ ಕೋರ್ಸುಗಳನ್ನು ರಾಷ್ಟ್ರೀಯ ಶಿಕ್ಷಣ ನೀತಿ-2020 ರಅನ್ವಯ ಶಿಸ್ತೀಯ ವಿಷಯಗಳನ್ನಾಗಿ ಮಾರ್ಪಾಡಿಸಿ ಪ್ರವೇಶಾತಿಯನ್ನು ವಿದ್ಯಾರ್ಥಿಪ್ರಮಾಣಕ್ಕೆ ಮೀರದಂತೆ ಮಾಡಿಕೊಳ್ಳತಕ್ಕದ್ದು.
2. 2024-25ನೇ ಸಾಲಿನ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಲಗತ್ತಿಸಿದೆ.ಕಾಲೇಜಿಗೆ ಸಿಂಡಿಕೇಟ್ /ಸ್ಥಳೀಯ ವಿಚಾರಣಾ ಸಮಿತಿ ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದೊಂದಿಗೆ ಮಾತ್ರ ಸಂಯೋಜನೆಯನ್ನು ನವೀಕರಿಸಲಾಗಿದೆ. ಕಾಲೇಜು 15 ದಿನಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಿರುವ ಕೊರತೆಗಳನ್ನು ಸರಿದೂಗಿಸಿಕೊಂಡು ಉತ್ತಮ ಪಡಿಸಿಕೊಂಡಿರುವ ಬಗ್ಗೆ ಹಾಗೂ ನ್ಯೂನ್ಯತೆಗಳನ್ನು ಸರಿಪಡಿಸಿಕೊಂಡಿರುವ ಕುರಿತುಅನುಸರಣಾ ವರದಿಯನ್ನು ನೀಡತಕ್ಕದ್ದು. ಇಲ್ಲವಾದಲ್ಲಿ ಮುಂದಿನ ಶೈಕ್ಷಣಿಕ ವರ್ಷದ ಸಂಯೋಜನಾ ನವೀಕರಣದಅರ್ಜಿಯನ್ನು ಸ್ವೀಕರಿಸಲಾಗುವುದಿಲ್ಲ.
3. **ಸದರಿ ಕಾಲೇಜಿನವರು 2024-25ನೇ ಸಾಲಿಗೆ ಕಾಲೇಜಿನ ವಿಳಾಸ ಬದಲಾವಣೆಗೆ ಅರ್ಜಿ ಸಲ್ಲಿಸಿದ್ದು ಸಕ್ಷಮ ಪ್ರಾಧಿಕಾರದಂತೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆ.**

**ಷರತ್ತುಗಳು:**

1. ಸ್ಥಳೀಯ ವಿಚಾರಣಾ ಸಮಿತಿಯು ನಮೂದಿಸಿರುವ ಷರತ್ತುಗಳನ್ನು ಪಾಲಿಸತಕ್ಕದ್ದು.
2. ನಿಗದಿತ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ಮೀರಿದ್ದಲ್ಲಿ ಹೆಚ್ಚುವರಿ ಪ್ರವೇಶ ಪ್ರಮಾಣಕ್ಕೆ ವಿಶ್ವವಿದ್ಯಾಲಯಅಂಗೀಕಾರ ನೀಡುವುದಿಲ್ಲ.
3. ಯಾವುದೇ ಕೋರ್ಸಿಗೆ/ಕೋರ್ಸುಗಳಿಗೆ ವಿಶ್ವವಿದ್ಯಾಲಯದ ಪೂರ್ವಾನುಮತಿಯಿಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.
4. ಸದರಿ ಪದವಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶಕಲ್ಪಿಸುವಾಗ ಸರ್ಕಾರದಿಂದಆಗಿAದಾಗ್ಗೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
5. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಬೋಧಕರು ಹಾಗೂ ಬೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.
6. ವೈಶಾಕ v/sರಾಜಸ್ಥಾನದರಾಜ್ಯ ಸರ್ಕಾರದ ವ್ಯಾಜ್ಯಕ್ಕೆ ಸಂಬAಧಿಸಿದAತೆ, ದಿನಾಂಕ:13-8-1997ರ ಸರ್ವೋಚ್ಛ ನ್ಯಾಯಾಲಯದತೀರ್ಪಿನಂತೆ, ಕಾಲೇಜುಅಥವಾಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿಯಿಂದ (ಬೋಧಕ/ಬೋಧಕೇತರ/ಆಡಳಿತಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆಯಾವುದೇರೀತಿಯ ಕಿರುಕುಳ, ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚುಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿಅಂತಹವರನ್ನು ಕೆಲಸದಿಂದ/ವಿದ್ಯಾರ್ಥಿದೆಸೆಯಿAದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾದಗಳನ್ನು/ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಛ ನ್ಯಾಯಲಯದಆದೇಶದಂತೆದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು.
7. ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆಕಾಲೇಜು ಕೋರ್ಸುಗಳ ಶಿಕ್ಷಣ ಕ್ರಮವನ್ನುಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು ಹಾಗೂ ಸೇವೆಯಲ್ಲಿರುವ ಭೋಧಕರುಗಳನ್ನು ಪ್ರಾಂಶುಪಾಲರು/ ಆಡಳಿತಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.
8. ಕಾಲೇಜು ವಿನಾಕಾರಣ ವಿದ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು ಆರು ತಿಂಗಳ ಅವಧಿ ಮೀರದಂತೆತಮ್ಮಲ್ಲಿಯೇ ಇಟ್ಟುಕೊಳ್ಳತಕ್ಕದ್ದಲ್ಲ, ಪ್ರವೇಶಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು, ಪ್ರವೇಶಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.
9. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ಸೆಮಿಸ್ಟರ್‌ನ ಪೂರ್ಣವಾಗದಅವಧಿಯ ಭೋದನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರಅನುಮತಿಇರುವುದಿಲ್ಲ.
10. ಯಾವುದೇರೀತಿಯಾದಕ್ಯಾಪಿಟೇಷನ್ ಶುಲ್ಕವನ್ನುಕಾಲೇಜು ವಸೂಲಿ ಮಾಡತಕ್ಕದ್ದಲ್ಲ.
11. ಆಡಳಿತ ವ್ಯವಹಾರದಲ್ಲಿಕನ್ನಡವನ್ನುಕಡ್ಡಾಯವಾಗಿ ಬಳಸತಕ್ಕದ್ದು.
12. 2025-26ನೇ ಸಾಲಿಗೆ ಕೋರ್ಸುಗಳ ಸಂಯೋಜನಾ ನವೀಕರಣಕ್ಕೆಕಾಲೇಜುತಪ್ಪದೆಅರ್ಜಿಯನ್ನು ಸಲ್ಲಿಸತಕ್ಕದ್ದು.
13. ಐದು ವರ್ಷಗಳನ್ನು ಪೂರೈಸಿರುವ ಕಾಲೇಜುಗಳು ನ್ಯಾಕ್(NAAC)ಅನುಮೋದನೆಯನ್ನುಕೂಡಲೇ ಪಡೆದುಕೊಳ್ಳತಕ್ಕದ್ದು.
14. ಪ್ರಾಂಶುಪಾಲರು, ಮೌಲ್ಯಮಾಪನಕಾರ್ಯಕ್ಕಾಗಿಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬAಧಿಸಿದ ಪರೀಕ್ಷಾ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು. ತಪ್ಪಿದ್ದಲ್ಲಿಕಾಲೇಜಿನ ಸಂಯೋಜನೆಯನ್ನುರದ್ದುಪಡಿಸಲಾಗುವುದು.

E-Office No:67799

15. ಪ್ರತಿಕಾಲೇಜುಆಯಾ ಶೈಕ್ಷಣಿಕ ವರ್ಷದಲ್ಲಿ ಕನಿಷ್ಠ ಎರಡು ಆಡಳಿತ ಮಂಡಳಿ (Governing Council) ಸಭೆಗಳನ್ನು ಕಡ್ಡಾಯವಾಗಿ ನಡೆಸಿ ವರದಿಯನ್ನು ವಿಶ್ವವಿದ್ಯಾಲಯಕ್ಕೆತಪ್ಪದೇ ಸಲ್ಲಿಸತಕ್ಕದ್ದು.

ಆದೇಶಾನುಸಾರ

ಕುಲಸಚಿವರು

ಕುಲಸಚಿವರು
ಬೆಂಗಳೂರು ಉತ್ತರ ವಿಶ್ವವಿದ್ಯಾಲಯ
ಟಮಕ, ಕೋಲಾರ, ಕರ್ನಾಟಕ-563 103.

**ಗೆ,**
**ಪ್ರಾಂಶುಪಾಲರು,**
**ಕ್ಯಾವೀಲಿಯರ್ ಆನಿಮೇಷನ್ ಅಂಡ್ ಮೀಡಿಯಾಕಾಲೇಜು,**
**# 56-04, ಕ್ಯಾವೀಲಿಯರ್ ಟವರ್, ಡಾ.ಬೇಂದ್ರೆ ಬಡಾವಣೆ, ಗುಬ್ಬಿಕ್ರಾಸ್,**
**ಕೊತ್ತನೂರು, ಬೆಂಗಳೂರು-560077.**

**ಪ್ರತಿಗಳು**:
1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ), ಬಹುಮಹಡಿಗಳ ಕಟ್ಟಡ, ಡಾ|| ಅಂಬೇಡ್ಕರ್ ವೀಧಿ, ಬೆಂಗಳೂರು-1.
2) ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು-1.
3) ಆಪ್ತಶಾಖೆ,ಕುಲಪತಿಗಳ ಕಛೇರಿ, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಕೋಲಾರ.
4) ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಕೋಲಾರ.
5) ವಿತ್ತಾಧಿಕಾರಿಗಳು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಕೋಲಾರ
6) ಕಛೇರಿ ಪ್ರತಿ.